## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ : ದಾವಣಗೆರೆ ಜಿಲ್ಲೆ ಹರಿಹರ ತಾಲ್ಲೂಕು ಭಾನುವಳ್ಳಿ ಮತ್ತು ಇತರೆ 20 ಗ್ರಾಮಗಳ ಕುಡಿಯುವ ನೀರು ಸರಬರಾಜು ಯೋಜನೆ ಬಾಕಿ ಬಿಲ್ಲು ಪಾವತಿಗಾಗಿ ಅನುದಾನ ಬಿಡುಗಡೆ ಮಾಡುವ ಕುರಿತು.

ಓದಲಾಗಿದೆ: ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ ಇವರ ಪತ್ರ ಸಂ:ಮುಇಂ ಪಂರಾಇಂಇ ತ್ವಗ್ರಾನೀಸ-1 ತಾಂಸ-1 ಸಇಂ-2/09-08 ದಿ:9.4.09

\- - -

**ಪೀಠಿಕೆ:**

ಕೇಂದ್ರ ಪುರಸ್ಕೃತ ಸಬ್-ಮಿಷನ್ ಕಾರ್ಯಕ್ರಮದಡಿ ದಾವಣಗೆರೆ ಜಿಲ್ಲೆ ಹರಿಹರ ತಾಲ್ಲೂಕು ಭಾನುವಳ್ಳಿ ಮತ್ತು ಇತರೆ 20 ಗ್ರಾಮಗಳ ಕುಡಿಯುವ ನೀರು ಸರಬರಾಜು ಯೋಜನೆ ಅನುಮೋದನೆಯಾಗಿದ್ದು, ಕಾಮಗಾರಿ ಪ್ರಗತಿಯಲ್ಲಿದೆ. ಬಾಕಿ ಬಿಲ್ಲು ಪಾವತಿ ಸಲುವಾಗಿ ರೂ.5.00 ಕೋಟಿ ಹಣ ಬಿಡುಗಡೆ ಮಾಡುವಂತೆ ಮೇಲಿನ ಪ್ರಸ್ತಾವನೆಯಲ್ಲಿ CE/PRED ರವರು ಕೋರಿದ್ದಾರೆ. 2008-09ನೇ ಸಾಲಿನಲ್ಲಿ ARWSP ಕಾರ್ಯಕ್ರಮದಡಿ ಬಿಡುಗಡೆಯಾಗಿ ರಾಜ್ಯದಲ್ಲಿ ಖರ್ಚಾಗದೆ ಉಳಿದಿರುವ ರೂ.7.50 ಕೋಟಿ ಅನುದಾನದ ವತಿಯಿಂದ ಸದರಿ ಯೋಜನೆಗೆ ರೂ.2.00 ಕೋಟಿ ಅನುದಾನ ಬಿಡುಗಡೆ ಮಾಡಬಹುದೆಂದು ನಿರ್ಧರಿಸಲಾಗಿದೆ. ಆದ್ದರಿಂದ ಈ ಆದೇಶ.

### ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 1 ಗ್ರಾನೀಸ (5)09 ಬೆಂಗಳೂರು, ದಿನಾಂಕ:08.05.2009

ಪೀಠಿಕೆಯಲ್ಲಿನ ಅಂಶಗಳನ್ನು ಪರಿಶೀಲಿಸಲಾಗಿ ಸಬ್-ಮಿಷನ್ ಕಾರ್ಯಕ್ರಮದಡಿ ಮಂಜೂರಾಗಿರುವ ದಾವಣಗೆರೆ ಜಿಲ್ಲೆ ಹರಿಹರ ತಾಲ್ಲೂಕು ಭಾನುವಳ್ಳಿ ಮತ್ತು ಇತರೆ 20 ಗ್ರಾಮಗಳ ಕುಡಿಯುವ ನೀರು ಸರಬರಾಜು ಯೋಜನೆ ಕಾಮಗಾರಿ ಬಾಕಿ ಬಿಲ್ಲು ಪಾವತಿಗಾಗಿ **ರೂ.200.00 ಲಕ್ಷಗಳನ್ನು** (ಇನ್ನೂರು ಲಕ್ಷ ರೂಪಾಯಿಗಳು ಮಾತ್ರ) ಕೇಂದ್ರ ಪುರಸ್ಕೃತ ARWSP ಲೆಕ್ಕ ಶೀರ್ಷಿಕೆಯಡಿ ದಾವಣಗೆರೆ ಜಿಲ್ಲಾ ಪಂಚಾಯತ್‌ಗೆ ಬಿಡುಗಡೆ ಮಾಡಲು ಸರ್ಕಾರವು ಹರ್ಷಿಸುತ್ತದೆ.

2. ಈ ಆದೇಶದಲ್ಲಿ ಬಿಡುಗಡೆಯಾಗಿರುವ ಅನುದಾನವನ್ನು ಸರ್ಕಾರದ ಆದೇಶ ಸಂ:FD-07/ZPA/2003 ದಿ:14.7.2005ರನ್ವಯ ಖಜಾನೆಯಿಂದ ಪಡೆದು ಉದ್ದೇಶಿತ ಯೋಜನೆ ಅನುಷ್ಠಾನ ಸಲುವಾಗಿ ಮಾತ್ರ ಯೋಜನಾ ಮಾರ್ಗದರ್ಶಿಗಳನ್ವಯ ವೆಚ್ಚ ಭರಿಸತಕ್ಕದ್ದು.

3. ಕಾಮಗಾರಿವಾರು ಪ್ರಗತಿ ವರದಿಯನ್ನು ಪ್ರತಿ ಮಾಹೆ ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು-20 ಇವರಿಗೆ ಹಾಗೂ ಸರ್ಕಾರಕ್ಕೆ ಸಲ್ಲಿಸುವುದು.

4. ಈ ಅನುದಾನದ ವೆಚ್ಚವನ್ನು ಲೆಕ್ಕಶೀರ್ಷಿಕೆ 4215-ನೀರು ಸರಬರಾಜು ಮತ್ತು ನೈರ್ಮಲ್ಯ ಮೇಲಣ ಬಂಡವಾಳ ವೆಚ್ಚ -01-ನೀರು ಸರಬರಾಜು-102 - ಗ್ರಾಮೀಣ ನೀರು ಸರಬರಾಜು-9- ಟೆಸ್ಟ್ - 04 - ಟೆಸ್ಟ್ ಗ್ರಾಮೀಣ ನೀರು ಸರಬರಾಜು - 132 - ಬಂಡವಾಳ ವೆಚ್ಚಗಳು (ಯೋಜನೆ) (ARWSP) 2009-109ರಡಿ ಭರಿಸತಕ್ಕದ್ದು. (4215-01-102-9-04-132)

5. ಈ ಆದೇಶವನ್ನು ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಟಿಪ್ಪಣಿ ಸಂ:ಗ್ರಾಅಪ 137 ಪಿಬಿಎಸ್ 2009 ದಿ:6.5.2009ರ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಪಿ.ಎ.ಮೇಘಣ್ಣವರ )
ನಿರ್ದೇಶಕರು (ಗ್ರಾಮೂಸೌ) ಹಾಗೂ
ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿಗಳು
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

ಪ್ರತಿಗಳು :

1. ಮಹಾಲೇಖಪಾಲರು (ಲೆಕ್ಕಪತ್ರ) ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಎಯು-1) ಕರ್ನಾಟಕ, ಬೆಂಗಳೂರು.
3. ಮಹಾಲೇಖಪಾಲರು (ಎಯು-2) ಕರ್ನಾಟಕ, ಬೆಂಗಳೂರು.
4. ಉಪ ಮಹಾಲೇಖಪಾಲರು, ಮಹಾಲೇಖಪಾಲರು (ಎಯು-1) ರವರ ಶಾಖಾ ಕಚೇರಿ, ಕಾಲೇಜು ರಸ್ತೆ, ಧಾರವಾಡ.
3. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ.
5. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ಇವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
6. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಯೋಜನಾ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ಬೆಂಗಳೂರು.
7. ವಿಶೇಷಾಧಿಕಾರಿಗಳು (ಜಿಪಂ) ಹಾಗೂ ಸರ್ಕಾರದ ಪದನಿಮಿತ್ತ ಉಪಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ.
8. ಸರ್ಕಾರದ ಅಧೀನ ಕಾರ್ಯದರ್ಶಿ, ವೆಚ್ಚ (6) (ಜಿಪಂ) ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
9. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಕರ್ನಾಟಕ ಕೊಳಚೆ ನಿರ್ಮೂಲನಾ ಮಂಡಳಿ ಸಂಕೀರ್ಣ,ಅಭಯ ಸಂಕೀರ್ಣ, 4ನೇ ಮಹಡಿ, ನಂ.55, ರೆಸಾಲ್ದಾರ್ ರಸ್ತೆ, ಶೇಷಾದ್ರಿಪುರಂ, ಬೆಂಗಳೂರು-20.
10. ಅಧ್ಯಕ್ಷರು, ಜಿಲ್ಲಾ ಪಂಚಾಯತ್, ದಾವಣಗೆರೆ.
11. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ / ಮುಖ್ಯ ಲೆಕ್ಕಾಧಿಕಾರಿ, ಜಿಲ್ಲಾ ಪಂಚಾಯತ್, ದಾವಣಗೆರೆ.
12. ಅಧೀಕ್ಷಕ ಅಭಿಯಂತರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವೃತ್ತ, ದಾವಣಗೆರೆ.
13. ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ದಾವಣಗೆರೆ
14. ಮುಖ್ಯ ಲೆಕ್ಕಾಧಿಕಾರಿಗಳು, ಮುಖ್ಯ ಇಂಜಿನಿಯರ್‌ರ ಕಛೇರಿ, PRED, ಬೆಂಗಳೂರು.
15. ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ ಇಲಾಖೆ, ಬೆಂಗಳೂರು
16. ಉಪ ನಿರ್ದೇಶಕರು, ನೆಟ್‌ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್,ನಂ.49, ಖನಿಜ ಭವನ,ರೇಸ್‌ಕೋರ್ಸ್‌ರಸ್ತೆ, ಬೆಂಗಳೂರು.
17. ಜಿಲ್ಲಾ ಖಜಾನಾಧಿಕಾರಿ, ದಾವಣಗೆರೆ.
18. ಸಹ ನಿರ್ದೇಶಕರು,ಶ್ರೀಅಬ್ದುಲ್ ನಜೀರ್‌ಸಾಬ್‌ರವರ ಗ್ರಾಮೀಣಾಭಿವೃದ್ಧಿ ರಾಜ್ಯ ಸಂಸ್ಥೆ,ಲಲಿತ್ ಮಹಲ್ ರಸ್ತೆ,ಮೈಸೂರು.
19. ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಕಾರ್ಯದರ್ಶಿ/ಕಾರ್ಯದರ್ಶಿ (ಪಂರಾ) ಇವರ ಆಪ್ತ ಕಾರ್ಯದರ್ಶಿಗಳು.
20. ನಿರ್ದೇಶಕರು, KRWSSA & ಪದನಿಮಿತ್ತ ಸರ್ಕಾರದ ಅಪರ ಕಾರ್ಯದರ್ಶಿ/ನಿರ್ದೇಶಕರು (ಗ್ರಾಮೂಸೌ) ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ/ನಿರ್ದೇಶಕರು(ಗ್ರಾಮಸ್ವರಾಜ್)/ಆಂತರಿಕ ಆರ್ಥಿಕ ಸಲಹೆಗಾರರು, RDPR ಇಲಾಖೆ ಇವರುಗಳ ಆಪ್ತ ಸಹಾಯಕರು.
21. ಮುಖ್ಯ ಸಂಪಾದಕರು ಮತ್ತು ಸಂಪರ್ಕಾಧಿಕಾರಿ "ಕರ್ನಾಟಕ ವಿಕಾಸ" ಗ್ರಾಅಪಂ.ರಾಜ್ ಇಲಾಖೆ, ಬೆಂಗಳೂರು.
22. ಶಾಖಾಧಿಕಾರಿ, ರವಾನೆ ಮತ್ತು ಸ್ವೀಕೃತಿ ಶಾಖೆ, ಗ್ರಾಅಪಂರಾ ಇಲಾಖೆ (ವಾರದ ಗೆಜೆಟ್‌ನಲ್ಲಿ ಪ್ರಕಟಿಸಲು 5 ಪ್ರತಿಗಳು)
23. ರಾಜ್ಯ ಪತ್ರಾಗಾರ ಇಲಾಖೆ (ಬಿಡಿ ಪ್ರತಿ ಶಾಖೆ) /
24. ಗ್ರಾಅಪ ಇಲಾಖೆಯ ಮಾಹಿತಿ ಕೇಂದ್ರ (10 ಪ್ರತಿಗಳು) 25. ಶಾಖಾ ರಕ್ಷಾ ಕಡತ : ಹೆಚ್ಚುವರಿ ಪ್ರತಿಗಳು.